

ಅರುಣ ಪಿ. ಭಟ್ಟ

## ವಾರಭವಿಷ್ಯ 19.12.2019ರಿಂದ 25.12.2019ರ ವರೆಗೆ.




ವಾರದ ಆರಂಭದಲ್ಲಿ ವೃತ್ತಿ ಜೀವನದಲ್ಲಿ ಕೀರ್ತಿ ಲಭಿಸುತ್ತದೆ. ಇನ್ನು ಉದ್ಯೋಗಸ್ಥರಿಗೆ ಜವಾಬ್ದಾರಿ ಹೆಚ್ಚಾಗಲಿದೆ. ವೈಯಕ್ತಿಕ ಜೀವನದಲ್ಲೂ ಉತ್ತಮವಾದ ಸಮಯ ಇದು. ವಿದ್ಯಾರ್ಥಿಗಳು ಹೆಚ್ಚು ಜಾಗರೂಕರಾಗಿ ಇರಬೇಕು.

**ಶುಭದಿನ 20. ಗಣಪತಿಗೆ ದೂರ್ವಾರ್ಚನೆ ಮಾಡಿರಿ.**




ವಾರದ ಆರಂಭದಲ್ಲಿ ಧಾರ್ಮಿಕ ಕಾರ್ಯಕ್ರಮಗಳು, ದೇವತಾ ಆರಾಧನೆ ಕಡೆಗೆ ನಿಮ್ಮ ಗಮನ ಹೆಚ್ಚಿರುತ್ತದೆ. ತೀರ್ಥಕ್ಷೇತ್ರ ಪ್ರವಾಸ ಮಾಡಬೇಕು ಅಂದುಕೊಂಡವರಿಗೆ, ಹಿರಿಯರ ಸೇವೆ ಮಾಡಲು ಬಯಸುವವರಿಗೆ ಅದಕ್ಕೆ ಅವಕಾಶ ದೊರೆಯಲಿದೆ.

**ಶುಭದಿನ 22. ಸೌಂದರ್ಯ ಲಹರಿ ಪಠಿಸಿರಿ.**




ವಾರದ ಆರಂಭ ಕೌಟುಂಬಿಕ ವಿಚಾರದಲ್ಲಿ ಕೆಲವು ಕಷ್ಟಗಳು ಎದುರಾಗಲಿವೆ. ಈಗಾಗಲೇ ಇರುವ ಸಮಸ್ಯೆಗಳ ಜತೆಗೆ ಇದು ಕೂಡ ಸೇರ್ಪಡೆಯಾಗುತ್ತದೆ. ಆದರೆ ಹೆದರುವ ಅಗತ್ಯ ಇಲ್ಲ. ನಿಮ್ಮ ಪ್ರಯತ್ನ ಯಶಸ್ಸಿಗೆ ಸಹಕಾರಿ ಆಗಿರುತ್ತದೆ.

**ಶುಭದಿನ 23. ಹನುಮಾನ್ ಚಾಲಿಸ್ ಓದಿರಿ.**




ವಾರದ ಆರಂಭದಲ್ಲಿ ಜೀವನದಲ್ಲಿ ಸಂತಸ ಇರುತ್ತದೆ. ಸಂಗಾತಿ ಜತೆ ಉತ್ತಮ ಬಾಂಧವ್ಯ ಇರಲಿದೆ. ಉದ್ಯೋಗ, ವ್ಯಾಪಾರ ಕ್ಷೇತ್ರದಲ್ಲಿ ಯಶಸ್ಸು ಪಡೆಯಲು ಸಾಕಷ್ಟು ಅವಕಾಶಗಳು ದೊರೆಯಲಿವೆ. ಆತ್ಮವಿಶ್ವಾಸ ಹೆಚ್ಚಾಗಲಿದೆ.

**ಶುಭದಿನ 24. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.**




ರಾಜಕಾರಣ, ಸಮಾಜ ಸೇವೆ, ತಂತ್ರಜ್ಞಾನ ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ಇರುವವರಿಗೆ ವಾರದ ಆರಂಭದಲ್ಲಿ ಪ್ರಗತಿ ಇದೆ. ಉದ್ಯೋಗ ನಿಮಿತ್ತವಾಗಿ ಈ ಅವಧಿಯಲ್ಲಿ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಸೃಷ್ಟಿಯಾಗಬಹುದು.

**ಶುಭದಿನ 22. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.**




ಮಕ್ಕಳ ಶಿಕ್ಷಣ, ಉದ್ಯೋಗ, ಭವಿಷ್ಯದ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಈ ಪೈಕಿ ಯಾವುದಾದರೂ ಉದ್ದೇಶ ಈಡೇರಲು ಮನೆಯನ್ನು ಬದಲಿಸುವ ಸಾಧ್ಯತೆ ಕೂಡ ಇದೆ. ಇನ್ನು ವಿದ್ಯಾರ್ಥಿಗಳಿಗೆ ಶಿಕ್ಷಣದಲ್ಲಿ ಯಶಸ್ಸು ದೊರೆಯಲಿದೆ.

**ಶುಭದಿನ 24. ವಿಷ್ಣು ಸಹಸ್ರನಾಮ ಪಠಿಸಿರಿ.**




ಉದ್ಯಮಿಗಳು ವ್ಯಾಪಾರಸ್ಥರಿಗೆ ಉತ್ತಮ ಸಮಯ ಇದು. ಇದರಿಂದ ಸಂತಸ ಉಂಟಾಗಲಿದೆ. ಈ ಅವಧಿಯಲ್ಲಿ ಆರೋಗ್ಯವೂ ಉತ್ತಮವಾಗಿರುತ್ತದೆ. ಉದ್ಯೋಗಿಗಳಿಗೆ ದೊರೆಯುತ್ತಿರುವ ಸವಲತ್ತು ಮತ್ತಷ್ಟು ವಿಸ್ತರಣೆಯಾಗಲಿದೆ.

**ಶುಭದಿನ 21. ಲಿಂಗಾಷ್ಟಕ ಪಠಿಸಿರಿ.**




ವಾರದ ಶುರುವಿನಲ್ಲಿ ನಿಮ್ಮ ಸಾಮರ್ಥ್ಯ ಹೆಚ್ಚಲಿದೆ. ಕೌಟುಂಬಿಕ ಜೀವನದಲ್ಲೂ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ಸೈನ್ಯ, ಭದ್ರತೆ, ಶಿಕ್ಷಣ ಹಾಗೂ ಆರ್ಥಿಕ ವ್ಯವಹಾರಗಳನ್ನು ನೋಡಿಕೊಳ್ಳುತ್ತಿರುವವರಿಗೆ ಉತ್ತಮ ಪ್ರಗತಿ ಇದೆ.

**ಶುಭದಿನ 20. ಚಂಡಿ ಪಾರಾಯಣ ಮಾಡಿರಿ.**




ಭೂಮಿ ಖರೀದಿ ಪ್ರಕ್ರಿಯೆಯಲ್ಲಿ ತೊಡಗಲಿದ್ದೀರಿ. ಈಗಾಗಲೇ ವ್ಯಾಜ್ಯಗಳು ಇದ್ದಲ್ಲಿ ಅವುಗಳನ್ನು ನಿವಾರಿಸಿಕೊಳ್ಳಲು ಸಫಲರಾಗುತ್ತೀರಿ. ವಾಸ್ತವದಲ್ಲಿ ಸಂತೋಷಪಡುವುದಕ್ಕೆ ಬೇಕಾದ ಸೌಕರ್ಯಗಳನ್ನು ಪಡೆಯಲಿದ್ದೀರಿ.

**ಶುಭದಿನ 24. ಗಣಪತಿ ಸುಬ್ರಮಣ್ಯ ಜಪ ಮಾಡಿರಿ.**




ನಿಮ್ಮ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಲಿದೆ. ಆ ಮೂಲಕ ನಿಮ್ಮ ಈಗಿನ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಅನುಕೂಲ ಆಗಲಿದೆ. ಭೂಮಿ ಖರೀದಿ ಬಗ್ಗೆ ಆಸಕ್ತರಾಗಿದ್ದಲ್ಲಿ ನಿಮ್ಮ ಪ್ರಯತ್ನ ಆರಂಭಿಸುವುದಕ್ಕೆ ಇದು ಸೂಕ್ತ ಸಮಯ.

**ಶುಭದಿನ 23. ನವದುರ್ಗಾ ಆರಾಧನೆ ಮಾಡಿರಿ.**




ನಿಮ್ಮ ಪ್ರತಿಭೆಯನ್ನು ಹೆಚ್ಚಿಸಿಕೊಳ್ಳಲು ಯತ್ನ. ನಿಮ್ಮ ವಿವೇಚನಾಶಕ್ತಿ ಹಾಗೂ ಧೈರ್ಯ ಅಗಾಧ ಪ್ರಮಾಣದಲ್ಲಿ ಹೆಚ್ಚಲಿದೆ. ವ್ಯಾಪಾರ ಒಪ್ಪಂದವನ್ನು ಪೂರ್ಣಗೊಳಿಸುವ ಸಲುವಾಗಿ ಹೆಚ್ಚು ಹಣ, ಸಮಯ ಮೀಸಲಿಡಬೇಕಾಗುತ್ತದೆ.

**ಶುಭದಿನ 20. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.**




ನಿಮ್ಮ ಶ್ರಮಕ್ಕೆ ತಕ್ಕಂತೆ ಫಲಿತಾಂಶ ದೊರೆಯಲಿದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸಂಗಾತಿ ಜತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಈ ಹಿಂದೆ ಭಿನ್ನಾಭಿಪ್ರಾಯ ಅಥವಾ ಮನಸ್ತಾಪಗಳು ಇದ್ದಲ್ಲಿ ಅವುಗಳನ್ನು ಬಗೆಹರಿಸಿಕೊಳ್ಳಲಿದ್ದೀರಿ.

**ಶುಭದಿನ 23. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.**


